ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 3 ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE: 12/3/21

# ಸಿಡಿ ಕೈಕಮಾಂಡ್ ತಾಕೀತು

## ಎಚ್ಚರಿಕೆ ಹೆಜ್ಜೆ ಇಡಲು ಹೈಕಮಾಂಡ್ ಸೂಚನೆ

• ಎಸ್.ಲಕ್ಷ್ಮೀನಾರಾಯಣ

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ಅಲ್ಲೋಲ-ಕಲ್ಲೋಲ ಸೃಷ್ಟಿಸಿರುವ ಸಿಡಿ ವಿಚಾರದಲ್ಲಿ ಎಚ್ಚರಿಕೆಯ ಹೆಜ್ಜೆ ಇಡಲು ಕಾಂಗ್ರೆಸ್ ಹೈಕಮಾಂಡ್ ತಾಕೀತು ಮಾಡಿದೆ.

ಈ ಸಂಬಂಧ ಅನಗತ್ಯ ಹೇಳಿಕೆಗಳಿಗೆ 'ಬ್ರೇಕ್' ಹಾಕಿ. ಅದು ಪಕ್ಷಕ್ಕೆ 'ಯಾವುದಾದರೂ' ರೂಪದಲ್ಲಿ ತಿರುಗುಬಾಣವಾಗಬಹುದು. ಮುಂದಿನ ಚುನಾವಣೆ ಮೇಲೂ ಅದರ ಎಫೆಕ್ಟ್ ಆಗಬಹುದು. ಹೀಗಾಗಿ ಯೋಚಿಸಿ ಮಾತನಾಡಿ ಎಂದು ಎಂದು ನಿರ್ದೇಶನ ನೀಡಿದೆ.

ಕಾಂಗ್ರೆಸ್ ಬಗ್ಗೆ ಬಂದ ಆರೋಪಗಳಿಗೆ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು ನೀಡಿದ ಹೇಳಿಕೆ ಸೇರಿ ಪ್ರಸಕ್ತ ವಿದ್ಯಮಾನಗಳ ಬಗ್ಗೆ ಮಾಹಿತಿ ತರಿಸಿಕೊಂಡಿರುವ ವರಿಷ್ಠರಾದ ಸೋನಿಯಾಗಾಂಧಿ ಹಾಗೂ ರಾಹುಲ್ ಗಾಂಧಿಯವರು ಪ್ರತಿ ಹಂತದಲ್ಲಿ ಯೋಚಿಸಿ ತೀರ್ಮಾನ ಕೈಗೊಳ್ಳುವಂತೆ ಸೂಚಿಸಿದೆ ಎಂದು ಮೂಲಗಳು ತಿಳಿಸಿವೆ.

ಸದನದ ಒಳಗೆ ಹಾಗೂ ಹೊರಗೆ ಹೋರಾಟದ ವಿಷಯದಲ್ಲಿ ಕೆಪಿಸಿಸಿ ಅಧ್ಯಕ್ಷರು ಹಾಗೂ ಶಾಸಕಾಂಗ ಪಕ್ಷದ ನಾಯಕರು ಜತೆಗೂಡಿ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಅವರ ಸಲಹೆ ಪಡೆದು ಮುಂದುವರಿಯಬೇಕು ಎಂದು ತಿಳಿಸಿದೆ.

**ಸಮನ್ವಯ ಸಮಿತಿ**

**ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿರುದ್ಧದ ಜನಜಾಗೃತಿ ಮತ್ತು ಜನಧ್ವನಿ ಅಭಿಯಾನ ಸೇರಿದಂತೆ ಪಕ್ಷದ ಹೋರಾಟ ರೂಪು-ರೇಷೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹಾಗೂ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ನಡುವೆ ಸಮನ್ವಯತೆ ಮೇಲ್ವಿಚಾರಣೆಗಾಗಿ ಸಮನ್ವಯ ಸಮಿತಿ ರಚಿಸುವ ಸಾಧ್ಯತೆಯೂ ಇದೆ. ಮಲ್ಲಿಕಾರ್ಜುನ ಖರ್ಗೆ, ಕೆ.ಎಚ್.ಮುನಿಯಪ್ಪ, ವೀರಪ್ಪ ಮೊಯಿಲಿ, ಬಿ.ಕೆ.ಹರಿಪ್ರಸಾದ್, ಸಿ.ಎಂ. ಇಬ್ರಾಹಿಂ ಸೇರಿದಂತೆ ಹಿರಿಯ ನಾಯಕರು ಇದರಲ್ಲಿ ಇರಲಿದ್ದಾರೆ ಎಂದು ಮೂಲಗಳು ತಿಳಿಸಿವೆ.**

**ವೈಯಕ್ತಿಕ ಟಾರ್ಗೆಟ್ ಬೇಡ:** ನ್ಯಾಯಾಲಯದ ಮೊರೆ ಹೋಗಿರುವ ಆರು ಸಚಿವರ ವಿಚಾರದಲ್ಲಿ ಉಭಯ ಸದನಗಳಲ್ಲಿ ಅನುಸರಿಸುತ್ತಿರುವ ಕಾರ್ಯತಂತ್ರಕ್ಕೆ ಮೆಚ್ಚುಗೆ ವ್ಯಕ್ತಪಡಿಸಿರುವ ಹೈಕಮಾಂಡ್, ವೈಯಕ್ತಿಕವಾಗಿ ಯಾರ ಬಗ್ಗೆಯೂ ಟಾರ್ಗೆಟ್ ಮಾಡುವುದು ಬೇಡ. ಇದಕ್ಕೆ ಬದಲಾಗಿ ಆಡಳಿತಾರೂಢ ಬಿಜೆಪಿ ವಿರುದ್ಧ ಮಾತ್ರ ಹೋರಾಟ ಇರಬೇಕು ಎಂಬ ಸಲಹೆಯನ್ನೂ ನೀಡಿದೆ.

ಕಾಂಗ್ರೆಸ್ ವಿರುದ್ಧ ಆರೋಪಗಳು ಬಂದಾಗ ಜಾಣ್ಮೆಯಿಂದ ಉತ್ತರಿಸಬೇಕು. ಎಲ್ಲರೂ ಮಾತನಾಡುವುದು ಬೇಡ. ಕೆಪಿಸಿಸಿ ಅಧ್ಯಕ್ಷರು ಹಾಗೂ ಪ್ರತಿಪಕ್ಷದ ನಾಯಕರು ಮಾತ್ರ ಮಾತನಾಡಲಿ. ಇಲ್ಲವೇ ಕಾನೂನಾತ್ಮಕವಾಗಿ ವಿಷಯ ಅರಿತಿರುವ ವಕ್ತಾರರಿಗೆ ಜವಾಬ್ದಾರಿ ವಹಿಸಿ ಎಂದು ತಿಳಿಸಿದೆ ಎಂದು ಹೇಳಲಾಗಿದೆ.

ರಮೇಶ್ ಜಾರಕಿಹೊಳಿ ಅವರ ಸಿಡಿ ವಿಚಾರ ವೈಯಕ್ತಿಕ ಸ್ವರೂಪ ಪಡೆದು ಪಕ್ಷಕ್ಕೆ ಡ್ಯಾಮೇಜ್ ಆಗಬಹುದು. ಇದು ಪಕ್ಷದ ಮೇಲೆ ಪರಿಣಾಮ ಬೀರಬಹುದು ಎಂಬ ಆತಂಕ ಹೈಕಮಾಂಡ್‌ಗೆ ಇದೆ. ಹೀಗಾಗಿಯೇ ಈ ನಿರ್ದೇಶನ ನೀಡಿದೆ ಎಂದು ತಿಳಿದು ಬಂದಿದೆ.

▶ 7ನೇ ಪುಟಕ್ಕೆ